ಶುಕ್ರವಾರ 19–09–2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01–ಸಂಚಿಕೆ 55

Digital Varthe Kannada Daily Volume 01 - Issue 55 Friday 19-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ

## ಮೈಸೂರು ದಸರಾ: ಪ್ರತಿಭಟನೆ ಮತ್ತು ಗೊಂದಲ ನಡೆಯದಂತೆ ಕಟ್ಟೆಚ್ಚರ ವಹಿಸಲು ಡಿಜಿ ಸೂಚನೆ

ಮೈಸೂರು: ದಸರಾ ಮಹೋತ್ಸವ ಉದ್ಘಾಟಕರ ವಿಚಾರದಲ್ಲಿ ವಿವಾದ ಉಂಟಾಗಿರು ವುದರಿಂದ ಚಾಮುಂಡಿ ಬೆಟ್ಟದಲ್ಲಿ ನಡೆಯಲಿರುವ ದಸರಾ ಉದ್ಘಾಟನೆ ಸಮಾರಂಭದಲ್ಲಿ ಯಾವುದೇ ಪ್ರತಿಭಟನೆ ಮತ್ತು ಗೊಂದಲ ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಸೂಚನೆ ನೀಡಿದರು.

ನಗರ ಪೊಲೀಸ್ ಆಯುಕ್ತರ ಕಚೇರಿ ಸಭಾಂಗಣ ದಲ್ಲಿ ದಸರಾ ಭದ್ರತೆ ಸಂಬಂಧ ನಡೆದ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ ಸೂಚನೆ ನೀಡಿದರು.

ಚಾಮುಂಡಿ ಬೆಟ್ಟದಲ್ಲಿ ನಡೆಯಲಿರುವ ದಸರಾ ಉದ್ಘಾಟನಾ ಕಾರ್ಯಕ್ರಮದಲ್ಲಿ ಪ್ರತಿಭಟನೆ ನಡೆಯುವ ಸಾಧ್ಯತೆ ಇರುವುದರಿಂದ ಹೆಚ್ಚಿನ ಪೊಲೀಸ್ ಪಡೆಯನ್ನು ನಿಯೋಜಿಸಬೇಕು. ಹಂತ ಹಂತವಾಗಿ ಭದ್ರತಾ ಕಾರ್ಯ ಕೈಗೊಳ್ಳಬೇಕು. ದಸರಾ ಉದ್ಘಾಟಕರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ಗಣ್ಯರು ಬಂದು ಕಾರ್ಯಕ್ರಮ ಮುಗಿಸಿ ಸುರಕ್ಷಿತವಾಗಿ ತೆರಳುವವರೆಗೆ ಎಚ್ಚರದಿಂದ ಇರಬೇಕು ಎಂದು ಸಲಹೆ ನೀಡಿದರು.

ಸೆ. 22ರಿಂದ ಅ. 2ರವರೆಗೆ ನಡೆಯಲಿರುವ ದಸರಾ ಉತ್ಸವಕ್ಕೆ ಸ್ಥಳೀಯರು ಸೇರಿದಂತೆ ಲಕ್ಷಾಂತರ ಪ್ರವಾಸಿಗರು ಆಗಮಿಸಲಿದ್ದು, ಹೆಚ್ಚಿನ ಪೊಲೀಸ್ ಪಡೆ ನಿಯೋಜಿಸಬೇಕು ಎಂದು ಸೂಚಿಸಿದರು.

ಅರಮನೆ ಸೇರಿದಂತೆ ಪಂಜಿನ ಕವಾಯತು ಮೈದಾನ, ಆಹಾರ ಮೇಳ ಮತ್ತು ಯುವ ದಸರಾ



ಕಾರ್ಯಕ್ರಮಗಳಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತದಂತಹ ಪ್ರಕರಣ ನಡೆಯದಂತೆ ಸಾರ್ವಜನಿಕರ ಮೇಲೆ ನಿಗಾವಹಿಸಬೇಕು. ವಿಜಯದಶಮಿ ಮೆರವಣಿಗೆ, ಟಾರ್ಚ್‌ಲೈಟ್ ಪರೇಡ್ ಮೈದಾನ, ಚಾಮುಂಡಿಬೆಟ್ಟ, ಯುವ ದಸರಾ, ಆಹಾರ ಮೇಳ, ಫಲಪುಷ್ಪ ಪ್ರದರ್ಶನ, ದಸರಾ ವಸ್ತುಪ್ರದರ್ಶನ, ವೈಮಾನಿಕ ಪ್ರದರ್ಶನದಂತಹ ಕಾರ್ಯಕ್ರಮ ನಡೆಯುವ ಸ್ಥಳದಲ್ಲೂ ಮೆಟಲ್ ಡಿಟೆಕ್ಟರ್ ಅಳವಡಿಸಿ, ಪ್ರತಿಯೊಬ್ಬರನ್ನೂ ತಪಾಸಣೆ ನಡೆಸಿ ಪ್ರವೇಶಾವಕಾಶ ನೀಡಬೇಕು.

ಮೈಸೂರು ನಗರ ಪೊಲೀಸ್ ಘಟಕವು ಜಿಲ್ಲಾಡಳಿತದೊಂದಿಗೆ ನಿರಂತರ ಚರ್ಚೆ ನಡೆಸಿ ದಸರಾ ಬಂದೋಬಸ್ತ್ ಯೋಜನೆಯನ್ನು ಅಂತಿಮಗೊಳಿಸಬೇಕು ಎಂದು ಸೂಚಿಸಿದರು.

ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಡಿಸಿಪಿಗಳಾದ ಆರ್.ಎನ್.ಬಿಂದು ಮಣಿ, ಕೆ. ಎಸ್.ಸುಂದರ್ ರಾಜ್, ಸಿದ್ದನಗೌಡ ಪಾಟೀಲ್, ಅಶ್ವಾರೋಹಿ ದಳದ ಪೊಲೀಸ್ ಕಮಾಂಡೆಂಟ್ ಎ.ಮಾರುತಿ, ನಗರ ಸಂಚಾರ ವಿಭಾಗದ ಎಸಿಪಿ ಎಂ.ಶಿವಶಂಕರ್, ಅರಮನೆ ಭದ್ರತಾ ವಿಭಾಗದ ಎಸಿಪಿ ಚಂದ್ರಶೇಖರ್ ಸೇರಿದಂತೆ ಎಲ್ಲಾ ಉಪ ವಿಭಾಗಗಳ ಎಸಿಪಿಗಳು ಇದ್ದರು.

## ಹೊಸ ಜಿಎಸ್‌ಟಿಯಿಂದ 2 ರಿಂದ 3 ಸಾವಿರ ಕೋಟಿ ರೂ.

# ವಿದ್ಯುತ್ ಖರೀದಿ ವೆಚ್ಚ ಉಳಿಕೆ



ನವದೆಹಲಿ: ಹೊಸ ಜಿಎಸ್‌ಟಿಯಿಂದ ಡಿಸ್ಕಾಂಗಳ ವಿದ್ಯುತ್ ಖರೀದಿ ಹೊರೆ ತಗ್ಗಿಸಲಿದ್ದು, ದೇಶಾದ್ಯಂತ ವಾರ್ಷಿಕ 2–3 ಸಾವಿರ ಕೋಟಿ ರೂ. ವಿದ್ಯುತ್ ಖರೀದಿ ವೆಚ್ಚ ಉಳಿತಾಯವಾಗಲಿದೆ. ಅಲ್ಲದೇ, ಪಿಎಂ ಸೂರ್ಯಘರ್ ಮತ್ತು ಪಿಎಂ ಕುಸುಮ್ ಘಟಕಗಳ ವೆಚ್ಚವೂ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಲಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸ ಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಜಿಎಸ್‌ಟಿ 2ರಲ್ಲಿ ನವೀಕರಿಸಬಹುದಾದ ಇಂಧನ ಸಾಧನ–ಸಲಕರಣೆಗಳ ಮೇಲಿನ ತೆ–ರಿಗೆಯನ್ನು ಶೇ.12ರಿಂದ ಶೇ.5ಕ್ಕೆ ಇಳಿಸಲಾಗಿದ್ದು, ಇದು ಭಾರತದ ಶುದ್ಧ ಇಂಧನ ಪರಿವರ್ತನಾ ಗುರಿಯ ಮತ್ತಷ್ಟು ವೇಗಕ್ಕೆ ಮತ್ತು ಅತ್ಯಂತ ಕಡಿಮೆ ವಿದ್ಯುತ್ ಉತ್ಪಾದನಾ ವೆಚ್ಚಕ್ಕೆ ನಾಂದಿ ಹಾಡಲಿದೆ. ಶುದ್ಧ ಇಂಧನ ಯೋಜನೆಗಳ ವೆಚ್ಚ ಸಹ ಕಡಿಮೆಯಾಗುತ್ತದೆ. ಮನೆಗಳು, ರೈತರು, ಕೈಗಾರಿಕೆ ಮತ್ತು ಡೆವಲಪರ್‌ಗಳಿಗೆ ಇದರ ನೇರ ಪ್ರಯೋಜನವಾಗುತ್ತದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪಿಎಂ ಸೂರ್ಯಘರ್ ಅಗ್ಗ: ಪಿಎಂ ಸೂರ್ಯ ಘರ್ ಯೋಜನೆಯಡಿ ಸೋಲಾರ್ ಮೇಲ್ಛಾವಣಿ 3 ಕಿಲೋವ್ಯಾಟ್ ಘಟಕ ಅಳವಡಿಕೆ 9,000ರೂ.ನಿಂದ 10,500 ರೂ.ವರೆಗೆ ಅಗ್ಗವಾಗಲಿದೆ. ಇದು ಲಕ್ಷಾಂತರ ಕುಟುಂಬಗಳು ಸೌರಶಕ್ತಿ ಅಳವಡಿಸಿಕೊಳ್ಳುವುದನ್ನು ಉತ್ತೇಜಿಸಲಿದೆ. ಅಲ್ಲದೇ, ವಿದ್ಯುತ್ ಬಳಕೆಯನ್ನೂ ಹೆಚ್ಚಿಸಲಿದೆ ಎಂದು ಅವರು ಹೇಳಿದ್ದಾರೆ.

ಪಿಎಂ–ಕುಸುಮ್ ಅಡಿ ರೈತರು ಸುಮಾರು 2.5 ಲಕ್ಷ ರೂ. ವೆಚ್ಚದ 5 ಹೆಚ್.ಪಿ. ಸೌರ ಪಂಪ್ ಅಳವಡಿಸಿಕೊಳ್ಳುವುದಾದರೆ ಸುಮಾರು 17,500 ರೂ. ಕಡಿಮೆಯಾಗಲಿದೆ. ಈ ಯೋಜನೆಯಡಿ ರೈತರು ಸಹ ಗಣನೀಯವಾಗಿ ಪ್ರಯೋಜನ ಪಡೆಯುತ್ತಾರೆ. ದೇಶದಲ್ಲಿ 10 ಲಕ್ಷ ಸೌರ ಪಂಪ್‌ಗಳ ಪ್ರಮಾಣದಲ್ಲಿ ಒಟ್ಟಾರೆ 1,750 ಕೋಟಿ ರೂ.ಉಳಿಸಬಹುದು ಎಂದು ಅವರು ತಿಳಿಸಿದ್ದಾರೆ.

ಉದ್ಯೋಗ ಸೃಜನೆ: ಮಾಡ್ಯೂಲ್ ಮತ್ತು ಘಟಕ ವೆಚ್ಚದಲ್ಲಿ ಶೇ.3ರಿಂದ 4ರಷ್ಟು ಕಡಿಮೆ ಮಾಡುವುದು ಹಾಗೂ ಆರ್‌ಇ ಸಲಕರಣೆಗಳ ಉತ್ಪಾದನೆ ಹೆಚ್ಚಿಸುವುದು ಇದರ ಸದುದ್ದೇಶವಾಗಿದೆ. ಈ ಮಟ್ಟದ ಜಿಎಸ್‌ಟಿ ಸುಧಾರಣೆಯಿಂದ ನವೀಕ–ರಿಸಬಹುದಾದ ಇಂಧನ ವಲಯದಲ್ಲಿ ಮುಂದಿನ ದಶಕದಲ್ಲಿ ಸರಿ ಸುಮಾರು 5ರಿಂದ 7 ಲಕ್ಷ ಹಸಿರು ಉದ್ಯೋಗಗಳು ಸೃಜನೆಯಾಗಲಿವೆ ಎಂದಿದ್ದಾರೆ. ಸಾಮಾನ್ಯವಾಗಿ ಪ್ರತಿ ಮೆಗಾವ್ಯಾಟ್ ವಿದ್ಯುತ್ ಘಟಕಕ್ಕೆ ಸುಮಾರು 3.5 –4 ಕೋಟಿ ರೂ.ಮೊತ್ತದ ಅವಶ್ಯಕತೆ ಇರುತ್ತದೆ. ಈಗ ಸೌರ ಯೋಜನೆ ಬಂಡವಾಳ ವೆಚ್ಚವು ಪ್ರತಿ ಮೆಗಾವ್ಯಾಟ್‌ಗೆ 2025 ಲಕ್ಷ ರೂ.ಉಳಿತಾಯವಾಗಲಿದೆ. 500 ಮೆಗಾವ್ಯಾಟ್ ಸೌರ ಪಾರ್ಕ್‌ನ ಪ್ರಮಾಣದಲ್ಲಿ ಇದು 100 ಕೋಟಿ ರೂ.ಗಿಂತ ಹೆಚ್ಚಿನ ಯೋಜನಾ ವೆಚ್ಚವನ್ನು ಉಳಿಸುತ್ತದೆ ಎಂದು ಸಚಿವ ಜೋಶಿ ತಿಳಿಸಿದ್ದಾರೆ.

2030ರ ವೇಳೆಗೆ 500 ಜಿ ಡಬ್ಲ್ಯು ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯದ ಗುರಿ ಹಾಗೂ ಹವಾಮಾನ ಬದಲಾವಣೆ ವಿರುದ್ಧದ ಜಾಗತಿಕ ಹೋರಾಟದಲ್ಲಿ ಭಾರತವನ್ನು ಮುಂಚೂಣಿಯಲ್ಲಿರಿಸುತ್ತದೆ. ದೇಶೀಯ ಉತ್ಪಾದನೆ ಮತ್ತು ಸ್ವಾವಲಂಬನೆಗೆ ಉತ್ತೇಜನ ನೀಡಲಿದೆ. ಸ್ವದೇಶಿ ನಿರ್ಮಿತ ಇಂಧನ ಉಪಕರಣಗಳ ಭರಾಟೆ ಹೆಚ್ಚಿಸುವುದಲ್ಲದೆ, ಈ ಮೂಲಕ ಮೇಕ್ ಇನ್ ಇಂಡಿಯಾ, ಆತನಿರ್ಭರ ಭಾರತ್ ಯೋಜನೆಗಳಿಗೆ ಬಲ ತುಂಬಲಿದೆ ಎಂದಿದ್ದಾರೆ.

ಭಾರತ 2030ರ ವೇಳೆಗೆ 100 ಜಿ ಡಬ್ಲ್ಯು ಸೌರ ವಿದ್ಯುತ್ ಉತ್ಪಾದನಾ ಸಾಮರ್ಥ್ಯದ ಗುರಿ ಹೊಂದಿದ್ದರಿಂದ ದೇಶೀಯ ಉತ್ಪಾದನಾ ಕೇಂದ್ರಗಳಲ್ಲಿ ಹೊಸ ಹೂಡಿಕೆಯನ್ನು ಉತ್ತೇಜಿಸುತ್ತದೆ. ಪ್ರತಿ ಜಿ ಡಬ್ಲ್ಯು ಉತ್ಪಾದನೆ ಸುಮಾರು 5,000 ಉದ್ಯೋಗಗಳನ್ನು ಸೃಷ್ಟಿಸುತ್ತದೆ. ಕಡಿತವು ಹೂಡಿಕೆದಾರರ ವಿಶ್ವಾಸವನ್ನೂ ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ. ಹೊಸ ದರದ ಜಿಎಸ್‌ಟಿಯು ವಿದ್ಯುತ್ ಖರೀದಿ ಒಪ್ಪಂದ ಮತ್ತು ಯೋಜನೆಗಳನ್ನು ತ್ವರಿತಗೊಳಿಸಲು ಅನುವು ಮಾಡಿಕೊಡುತ್ತದೆ. ಭಾರತ 2030ರ ವೇಳೆಗೆ ಸುಮಾರು 300 ಜಿ ಡಬ್ಲ್ಯು ನವೀಕರಿಸಬಹುದಾದ ಇಂಧನ ಸಾಮರ್ಥ್ಯ ಸೇರಿಸಲು ಯೋಜಿಸುತ್ತಿದ್ದು, ಶೇ.23ರಷ್ಟು ವೆಚ್ಚ ಕಡಿತವಾಗಿ ಹೂಡಿಕೆ ಸಾಮರ್ಥ್ಯ 11.5 ಲಕ್ಷ ಕೋಟಿ ರೂ. ಮೊತ್ತವನ್ನು ಮುಕ್ತಗೊಳಿಸುತ್ತದೆ. ಪ್ರತಿ ಸೌರಶಕ್ತಿ ವಾರ್ಷಿಕ 1.3 ಮಿಲಿಯನ್ ಟನ್ ಸಿಒ2 ಉಳಿಸುತ್ತದೆ. 2030ರ ವೇಳೆಗೆ ವರ್ಷಕ್ಕೆ ಹೆಚ್ಚುವರಿಯಾಗಿ 5070 ಮಿಲಿಯನ್ ಟನ್ ಸಿಒ2 ಹೊರಸೂಸುವಿಕೆ ತಪ್ಪಿಸಬಹುದು ಎಂದಿದ್ದಾರೆ.

## ಗ್ಯಾಂಗ್ರಿನ್ ನಿಂದ ಬಳಲುತ್ತಿದ್ದ ಅನಾಥನಿಗೆ ಮಿಡಿದ ಪೊಲೀಸ್ ಹೃದಯ. ಮಾದನಾಯಕನಹಳ್ಳಿ ಇನ್ಸ್ಪೆಕ್ಟರ್ ಎಂ. ಕೆ ಮುರುಳಿಧರ್ ಕಾರ್ಯಕ್ಕೆ ಸಾರ್ವಜನಿಕರ ಮೆಚ್ಚುಗೆ

ದಾಸನಪುರ: ಸಾಮಾನ್ಯವಾಗಿ ಪೊಲೀಸರೆಂದರೆ ಮೂಗು ಮುರಿಯುವ ಜನರೇ ಹೆಚ್ಚು ಆದರೆ ಇಲ್ಲೊಬ್ಬ ಪೊಲೀಸ್ ಅಧಿಕಾ–ರಿಯ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಮಾದನಾಯಕನಹಳ್ಳಿ ಬಳಿ ವಾರಸುದಾರರು ಇಲ್ಲದೆ ರಸ್ತೆ ಬದ್ದಿ ಮಲಗಿಕೊಂಡು ಜೀವನ ನಡೆಸುತ್ತಿದ್ದ ವ್ಯಕ್ತಿಯೊಬ್ಬರ ಕಾಲು ಗ್ಯಾಂಗ್ರಿಂನ್ ಗೆ ತುತ್ತಾಗಿತ್ತು ಕಾಲು ಕೊಳೆತಿದ್ದರಿಂದ ನಡೆಯಲಾಗದೆ ಅಶಕ್ತಿಯಿಂದ ನಿತ್ರಾಣಗೊಂಡಿದ್ದ ವ್ಯಕ್ತಿಯನ್ನು ಗಮನಿಸಿದ ಮಾದನಾಯಕನಹಳ್ಳಿ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ಎಂ ಕೆ ಮುರುಳಿಧರ್ ಕೂಡಲೇ ಡ್ರೀಮ್ ಇಂಡಿಯಾ ಟ್ರಸ್ಟ್ ಎಂಬ ಸಂಸ್ಥೆಗೆ ಕರೆ ಮಾಡಿ ಆ ವ್ಯಕ್ತಿಯ ಚಿಕಿತ್ಸೆ ಮತ್ತು ಆರೈಕೆಗೆ ಸಿಬ್ಬಂದಿಯೊಂದಿಗೆ ಕಳುಹಿಸಿಕೊಟ್ಟರು.

ಕೊಳೆತ ಪರಿಸ್ಥಿತಿಯಲ್ಲಿ ಅನ್ನ ಆಹಾರವಿಲ್ಲದೆ ಬಳಲಿದ ವ್ಯಕ್ತಿಯ ಜೀವನಕ್ಕೆ ಬೆಳಕಾಗಿ ಬಂದ ಇನ್ಸ್ಪೆಕ್ಟರ್ ಮುರಳಿಧರ್ ರವರ ಕಾರ್ಯಕ್ಕೆಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದು ಶುಭ ಹಾರೈಸಿದ್ದಾರೆ. ಜನಸ್ನೇಹಿ ಪೊಲೀಸ್ ಎಂಬ ಬಿರುದು. ಇನ್ಸ್ಪೆಕ್ಟರ್ ಮುರುಳಿಧರ್ ಅವರ ಸಮಾಜಮುಖಿ ಕಾರ್ಯ ಹೊಸತೇನಲ್ಲ ಈ ಹಿಂದೆಯೂ ಇಂತಹ ಅನೇಕ ಸಮಾಜಮುಖಿ ಕೆಲಸಗಳನ್ನು ಮಾಡಿದ ಉದಾಹರಣೆಗಳು ಇದ್ದು ಭ್ರಷ್ಟರು ಹಾಗೂ ಕಳ್ಳ ಕಾಕರ ಪಾಲಿಗೆ ಸಿಂಹಸ್ವಪ್ನವಾಗಿದ್ದಾರೆ ಇವರ ದಕ್ಷ ಹಾಗೂ ಪ್ರಾಮಾಣಿಕ ಸೇವೆಯನ್ನು ಗುರುತಿಸಿದ ಮಾದನಾಯಕನಹಳ್ಳಿ ಜನತೆ ಇವರಿಗೆ ಜನಸ್ನೇಹಿ ಪೊಲೀಸ್ ಎಂದು ಬಿರುದು ನೀಡಿದ್ದಾರೆ.

**ವರದಿ. ಮಂಜೇಶ್ ಕೆ ಎಸ್**



## ಬೆಂಗಳೂರು ಅಲ್ಲ ಗುಂಡಿಯೂರು, ಸರ್ಕಾರದ ವಿರುದ್ಧ ಹೆಚ್‌ಡಿಕೆ ಕಿಡಿ



ಬೆಂಗಳೂರು: ನಾಡಪ್ರಭು ಕೆಂಪೇಗೌಡರು ಕಟ್ಟಿದ ಹೆಮ್ಮೆಯ ಬೆಂಗಳೂರು ನಗರದ ಪ್ರತಿಷ್ಠೆಗೆ ಘೋರ ಪೆಟ್ಟು ಬಿದ್ದಿದೆ. ಬೆಂಗಳೂರು ಈಗ ಗುಂಡಿಯೂರು ಆಗಿ ಕುಖ್ಯಾತಿ ಆಗುತ್ತಿರುವುದು ದುರ್ದೈವ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಟೀಕಿಸಿದ್ದಾರೆ.

ಈ ಸಂಬಂಧ ಎಕ್?ಸನಲ್ಲಿ ಪೋಸ್ಟ್ ಮಾಡಿರುವ ಅವರು, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಇಬ್ಬರೂ ಈ ಅಪಮಾನಕ್ಕೆ ಹೊಣೆಗಾರರು. ಬೆಂಗಳೂರು ಮತ್ತು ಕರ್ನಾಟಕ ಇವತ್ತು ಅದಕ್ಷರು, ಭ್ರಷ್ಟರ ಕೈಯ್ಯಲ್ಲಿ ಸಿಕ್ಕಿ ನರಳುತ್ತಿವೆ. ಹೆಜ್ಜೆ ಹೆಜ್ಜೆಗೂ ಸಾವಿನ ಗುಂಡಿ. ಕಂಡೆಲ್ಲೆಲ್ಲ ಕಸದ ರಾಶಿ. ಗ್ರೇಟರ್ ಬೆಂಗಳೂರು ಎಂದರೆ ಇದೇನಾ ಜಿಬಿಎ ಏನು ಮಾಡುತ್ತಿದೆ? ಜನರ ತೆರಿಗೆ ದುಡ್ಡು ನುಂಗಿ ಗೊರಕೆ ಹೊಡೆಯುತ್ತಿದೆಯಾ ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿ ಆಡಳಿತದ ಘೋರ ವೈಫಲ್ಯವಾಗಿದೆ ಎಂದು ಉದ್ಯಮಿಗಳು ದೂರಿರುವುದು ಸರಿ ಇದೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕಿಲ್ಲ. ಉದ್ಯಮಿಗಳು ಸರ್ಕಾರದ ವೈಫಲ್ಯವನ್ನು ಇಷ್ಟು ಕಠಿಣವಾಗಿ ಎತ್ತಿ ತೋ–ರಿಸಿರುವುದು ಇತಿಹಾಸದಲ್ಲಿ ಇದೇ ಮೊದಲು. ಈ ಸರ್ಕಾರಕ್ಕೆ ಎಳ್ಳಷ್ಟೂ ಸಂಕೋಚ, ಆತಾಭಿಮಾನವಿಲ್ಲ. ಕನ್ನಡಿಗರ ಸ್ವಾಭಿಮಾನವನ್ನು ಗುಂಡಿಪಾಲು ಮಾಡಿದೆ ಎಂದು ಅವರು ವಾಗ್ದಾಳಿ ನಡೆಸಿದ್ದಾರೆ.

ತೆರಿಗೆ ಹಾಕುವುದರಲ್ಲಿ ಸರ್ಕಾರದ್ದು ರಾಕೆಟ್ ವೇಗ. ಗುಂಡಿ ಮುಚ್ಚುವುದರಲ್ಲಿ ಕೊನೇಪಕ್ಷ ಆಮೆ ವೇಗವೂ ಇಲ್ಲ. ಕೊಳ್ಳೆ ಹೊಡೆಯುವುದರಲ್ಲಿ ಇರುವ ಉನಾದ, ಅಭಿವೃದ್ಧಿಯತ್ತ ವಿಪರೀತ ಉಪೇಕ್ಷೆ. ಚುನಾವಣಾ ಗ್ಯಾರಂಟಿಗಳಿಗೆ ರಾಜ್ಯದ ಅಭಿವೃದ್ಧಿ ಬಲಿಯಾಗಿ ಗ್ರೇಟರ್ ಬೆಂಗಳೂರು ಗಬ್ಬೆದ್ದು ನಾರುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಗುಂಡಿ ಮುಚ್ಚುವುದಕ್ಕೆ ಬಿಡಿಗಾಸಿಲ್ಲದ ಸರ್ಕಾರ ಜನರಿಂದ ಕಿತ್ತುಕೊಳ್ಳುತ್ತಿರುವ ತೆರಿಗೆ ಹಣ ಏನು ಮಾಡುತ್ತಿದೆ? ಅದು ಯಾರ ಕಿಸೆ ಸೇರುತ್ತಿದೆ? ಇದಕ್ಕೆ ಉತ್ತರ ಬೇಕು ಎಂದು ಆಗ್ರಹಿಸಿರುವ ಅವರು, ಕಂಪನಿಗಳು ರಾಜ್ಯ ಸರ್ಕಾರದ ಮೇಲೆ ಭರವಸೆ ಕಳೆದುಕೊಂಡು ನೆರೆರಾಜ್ಯಗಳತ್ತ ವಲಸೆ ಹೋಗುತ್ತಿವೆ.


ಆ ರಾಜ್ಯಗಳು ಇಂಥ ಸಮಯಕ್ಕೇ ಕಾಯುತ್ತಾ ರಿಯಾಯ್ತಿ ಮೇಲೆ ರಿಯಾಯ್ತಿಗಳನ್ನು ನೀಡುತ್ತಿವೆ. ಭಂಡ ಸರಕಾರಕ್ಕೆ ಅರ್ಥವಾಗುತ್ತಿಲ್ಲ. ಈ ಸರ್ಕಾರದ ಪಂಚೇಂದ್ರಿಯಗಳು ನಿಷ್ಕ್ರಿಯವಾಗಿವೆ ಎಂದು ಟೀಕಾ ಪ್ರಹಾರ ನಡೆಸಿದ್ದಾರೆ.

ನೀವು ಬೆಂಗಳೂರು ಬಿಡುವುದು ಬೇಡ. ಈ ನಗರಕ್ಕೆ ಮಹಾನ್ ಪರಂಪರೆ, ಹಿನ್ನೆಲೆ ಇದೆ. ಈ ಎಮೆ ಚರ್ಮದ ಸರ್ಕಾರಕ್ಕೆ ಪಾಠ ಕಲಿಸುತ್ತೇವೆ. ನಿಮ ಜತೆ ನಾವು, ಇಡೀ ಕರ್ನಾಟಕದ ಜನತೆ ಇದ್ದೇವೆ. ಹೋಗುತ್ತೇವೆ ಎನ್ನುವ ಮಾತನ್ನು ಮನಸ್ಸಿನಿಂದ ತೆಗೆದುಬಿಡಿ. ನಾವೆಲ್ಲರೂ ಸೇರಿ ಬೆಂಗಳೂರು ನಗರವನ್ನು ಬದಲಿಸೋಣ ಎಂದು ಅವರು ಕಂಪನಿಗಳಲ್ಲಿ ಮನವಿ ಮಾಡಿದ್ದಾರೆ.

# ಮಿತಿಮೀರಿದ ನಕಲಿ ಪತ್ರಕರ್ತರ ಹಾವಳಿ :ಶಿವಾನಂದ ತಗಡೂರು ಕಳವಳ

ಬೆಂಗಳೂರು: ಪರಿಚಯ ಪತ್ರ ತೋರಿಸಿ ಬೆದರಿಸಿ ಹಣ ವಸೂಲಿ ಮಾಡುವ ನಕಲಿ ಪತ್ರಕರ್ತರ ಹಾವಳಿ ದಿನೇ ದಿನೇ ಹೆಚ್ಚಾಗುತ್ತಿದ್ದು ಕಡಿವಾಣ ಹಾಕಬೇಕಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಕಳವಳ ವ್ಯಕ್ತಪಡಿಸಿದರು. ಪೀಣ್ಯ ಕೈಗಾರಿಕಾ ಸಂಘದ ಸಭಾಂಗಣದಲ್ಲಿ ದಾಸರಹಳ್ಳಿ ಪತ್ರಕರ್ತ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ ಮಾಧ್ಯಮ ಸಮ್ಮೇಳನ ಹಾಗೂ ಪತ್ರಕರ್ತರ ಆರೋಗ್ಯ ನಿಧಿಯನ್ನು ಉದ್ಘಾಟಿಸಿ ಮಾತನಾಡಿದ ಅವರು ಪತ್ರಿಕೋದ್ಯಮದ ಗಂಧ ಗಾಳಿ ಇಲ್ಲದ, ಬದ್ಧತೆ ಇಲ್ಲದ ನಕಲಿ ಪತ್ರಕರ್ತರ ಸಂಖ್ಯೆ ಮಿತಿಮೀರಿದೆ.

ಸಮಾಜದಲ್ಲಿ ನಕಲಿ ಪತ್ರಕರ್ತ–ರಿಂದ ನೈಜ ಪತ್ರಕರ್ತರಿಗೂ ಕೆಟ್ಟ ಹೆಸರು ಬರುತ್ತಿದೆ. ವಸೂಲಿ ದಂದೆ ಮಾಡುವ ನಕಲಿಗಳ ನಡುವೆ ನೈಜ ಪತ್ರಕರ್ತರನ್ನು ಉಳಿಸಿ ಬೆಳೆಸಿಕೊಳ್ಳುವುದು ದೊಡ್ಡ ಸವಾಲಾಗಿದೆ. ನೈಜ ಪತ್ರಕರ್ತರ ಸಂತತಿ ಉಳಿಯದಿದ್ದರೆ




ಸಮಾಜಕ್ಕೆ ಒಳ್ಳೆಯದನ್ನು ಮಾಡಲು ಸಾಧ್ಯವಿಲ್ಲ ಹಾಗಾಗಿ ವಿಶ್ವಾಸಾರ್ಹ ಸಮಾಜಮುಖಿ ಪತ್ರಕರ್ತರನ್ನು ಪ್ರೋತ್ಸಾಹಿಸಿ, ನಕಲಿಗಳನ್ನು ಮುಲಾಜಿಲ್ಲದೆ ದೂರವಿಡಿ ಎಂದು ಕಿವಿ ಮಾತು ಹೇಳಿದರು ಇದೇ ಸಂದರ್ಭದಲ್ಲಿ ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ಅವರ ಮಾಧ್ಯಮ ಸಲಹೆಗಾರ ಲಕ್ಷ್ಮೀ ನಾರಾಯಣ್ ಮಾತನಾಡಿ ರಾಜೀವ್ ಗಾಂಧಿ ವಸತಿ ನಿಗಮ ನಿರ್ಮಿಸುತ್ತಿರುವ ಮುಖ್ಯಮಂತ್ರಿಗಳ ಒಂದು ಲಕ್ಷ ಬಹುಮಹಡಿ ವಸತಿ ಯೋಜನೆಯಡಿ ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ಜತೆ ಮಾತನಾಡಿ ಸಂಘದ ಸದಸ್ಯರಿಗೆ ಮನೆ ಮಂಜೂರು ಮಾಡಿಸುವುದಾಗಿ ಭರವಸೆ ನೀಡಿದ.

ಅವರು ಆರೋಗ್ಯ ಸೇವೆ ದುಬಾರಿಯಾಗಿರುವ ಕಾಲಘಟ್ಟದಲ್ಲಿ ಪತ್ರಕರ್ತರು ಸಕಾಲದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಪಡೆಯಲು ಯಾವುದಾದರೂ ಕಂಪನಿ ವಾರ್ಷಿಕ ಆರೋಗ್ಯ ವಿಮಾ ಶುಲ್ಕವನ್ನು ಪಾವತಿಸುವಂತೆ ಮನವಿ ಮಾಡಿ ಅದು ಇಡೀ ಕುಟುಂಬಕ್ಕೆ ಸಹಕಾರಿಯಾಗುತ್ತದೆ ಎಂದು ಇದೇ ವೇಳೆ ಸಲಹೆ ನೀಡಿದರು. ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ ಮಾತನಾಡಿ ಡಿಜಿಟಲ್ ಯುಗದ ಕಾಲಘಟ್ಟಕ್ಕೆ ತಕ್ಕಂತೆ ಪತ್ರಕರ್ತರ ವೃತ್ತಿಪರತೆ, ಕೌಶಲ್ಯವನ್ನು ವೃದ್ಧಿಸುವ ನಿಟ್ಟಿನಲ್ಲಿ ಇನ್ಫೋಸಿಸ್ ಜತೆ ಒಡಂಬಡಿಕೆ ಮಾಡಿಕೊಂಡಿದ್ದೇವೆ. ಕಂಪನಿಯವರು ಡಿಜಿಟಲ್ ತರಬೇತಿ, ಆರ್ಟಿಫಿಶಿಯಲ್ ಇಂಟಲಿಜೆನ್ಸ್ ತರಬೇತಿ ನೀಡಲಿದ್ದು ಪತ್ರಕರ್ತರು ಇದರ ಸದುಪಯೋಗ ಪಡೆದುಕೊಂಡು ಜೀವನಮಟ್ಟ ಹಾಗೂ ಆರ್ಥಿಕ ಮಟ್ಟ ಸುಧಾರಿಸಿಕೊಳ್ಳಿ ಎಂದು ತಿಳಿಸಿದರಲ್ಲದೇ ಸಮಾಜ ಸುಧಾರಣೆ ಹಾಗೂ ಸ್ವಸ್ಥ ಸಮಾಜ ನಿರ್ಮಾಣ ನಿಟ್ಟಿನಲ್ಲಿ ಶ್ರಮಿಸುವ ಪತ್ರಕರ್ತರು ತಮ್ಮ ಯೋಗಕ್ಷೇಮಕ್ಕಾಗಿ ಉಳ್ಳವರು ಸಹೃದಯಿಗಳ ನೆರವು ಕೊರುವುದು ಖಂಡಿತ ಮುಜುಗರವಲ್ಲ ಎಂದರು.

ಮಾಜಿ ಶಾಸಕ ಆರ್. ಮಂಜುನಾಥ್ ಮಾತನಾಡಿ ಪತ್ರಕರ್ತರ ಸಂಕಷ್ಟಗಳಿಗೆ ಸದಾ ಸ್ಪಂದಿಸುವ ಜತೆಗೆ ಅವರ ಕ್ಷೇಮಾಭಿವೃದ್ಧಿಗೆ ಸದಾ ಒತ್ತಾಸೆಯಾಗಿ ನಿಲ್ಲುವುದಾಗಿ ಭರವಸೆ ನೀಡಿದರು. ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಅಧ್ಯಕ್ಷ ಬಿ.ವಿ ಮಲ್ಲಿಕಾರ್ಜುನಯ್ಯ ಮಾತನಾಡಿ ಪತ್ರಕರ್ತರ ಯೋಗಕ್ಷೇಮಕ್ಕೆ ಆರೋಗ್ಯ ನಿಧಿ ಸ್ಥಾಪನೆ ಶ್ಲಾಘನೀಯ ಕಾರ್ಯ ಎಂದು ಪ್ರಶಂಶಿಸಿದರು. ದಾಸರಹಳ್ಳಿ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಚ್.ಆರ್ ಹರೀಶ್, ಪೀಣ್ಯ ಕೈಗಾರಿಕಾ ಸಂಘದ ಅಧ್ಯಕ್ಷ ಡಿ.ಪಿ ದಾನಪ್ಪ, ಹ್ಯೂಮನ್ ರೈಟ್ಸ್ ಪ್ರೊಟೆಕ್ಷನ್ ಕಮಿಟಿ ರಾಜ್ಯಾಧ್ಯಕ್ಷ ಚಿಕ್ಕಣ್ಣ, ಜಯ ಕರ್ನಾಟಕ ಸಂಘಟನೆ ರಾಜ್ಯಾಧ್ಯಕ್ಷ ಬಿ.ಎನ್ ಜಗದೀಶ್, ಜೆಡಿಎಸ್ ಮುಖಂಡರಾದ ಅಂದಾನಪ್ಪ, ಮುನೇಗೌಡ, ಪಾಲಿಕೆ ಮಾಜಿ ಸದಸ್ಯ ನಾಗಭೂಷಣ್, ಕ್ಷೇತ್ರ ಜಾನಪದ ಅಕಾಡೆಮಿ ಅಧ್ಯಕ್ಷ ವೈಬಿಎಚ್ ಜಯದೇವ್ ಸೇರಿದಂತೆ ಹಲವು ಗಣ್ಯರು ಪತ್ರಿಕೋದ್ಯಮ ವಿದ್ಯಾರ್ಥಿಗಳು, ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಇದ್ದರು.

ಡಿಜಿಟಲ್ ವಾರ್ತೆ

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಮಾಜಮುಖಿ ಕೆಲಸಗಳು ನಾಗರೀಕ ಸಮಾಜಕ್ಕೆ ಶಕ್ತಿದಾಯಕವಾಗಿವೆ; ಶಾಸಕ ಹೆಚ್. ಟಿ. ಮಂಜು ಅಭಿಮತ



ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸಮಾಜಮುಖಿ ಕೆಲಸಗಳು ನಾಗರೀಕ ಸಮಾಜ-ಕ್ಕೆ ಶಕ್ತಿದಾಯಕವಾಗಿವೆ. ಸುಜ್ಞಾನ ನಿಧಿ ಶಿಷ್ಯವೇತನ ಕಾರ್ಯಕ್ರಮವು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ವರದಾನವಾಗಿದೆ ಎಂದು ಶಾಸಕ ಹೆಚ್.ಟಿ.ಮಂಜು ಅವರು ಹೇಳಿದರು.

ಅವರು ಪಟ್ಟಣದ ಸುಲೋಚನಮ್ಮ ರಾಮದಾಸ್ ಸಭಾಂಗಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಹಮ್ಮಿಕೊಂಡಿದ್ದ ಸುಜ್ಞಾನ ಶಿಷ್ಯ ನಿಧಿ ವೇತನ ಮಂಜೂರಾತಿ ಪತ್ರ ವಿತರಣಾ ಸಮಾರಂಭವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು. ಆಡು ಮುಟ್ಟದ ಸೊಪ್ಪಿಲ್ಲ ಎನ್ನುವ ಗಾದೆ ಮಾತಿನಂತೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಅನುಷ್ಠಾನಗೊಳಿಸದ ಕಾರ್ಯಕ್ರಮ ಯಾವುದು ಉಳಿದಿಲ್ಲ.

ಸ್ವಂತ ಸೂರನ್ನು ಹೊಂದಿಲ್ಲದ ಕಡು ಬಡವರಿಗೆ ಸ್ವಂತ ಮನೆ ನೀಡುವ ಕಾರ್ಯಕ್ರಮ, ಅನಾಥರು ಹಾಗೂ ಕಡು ಬಡವರಿಗೆ ಮಾಸಿಕ ನಿಧಿ ವಿತರಣಾ ಕಾರ್ಯಕ್ರಮ, ರೈತರ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಕೃಷಿ ಯಂತ್ರ ಧಾರೆ ಕಾರ್ಯಕ್ರಮ ಸೇರಿದಂತೆ ಗ್ರಾಮೀಣ ಪ್ರದೇಶದ ರೈತ ಬಾಂಧವರ ಸಾವಿರಾರು ಮಕ್ಕಳಿಗೆ ಸುಜ್ಞಾನ ಶಿಷ್ಯನಿಧಿ ವೇತನ ಕಾರ್ಯಕ್ರಮದ ಅಡಿಯಲ್ಲಿ ವೃತ್ತಿಪರ ಶಿಕ್ಷಣ ಕೋರ್ಸುಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 12 ಸಾವಿರದಿಂದ 40,000 ಹಾಗೂ 50 ಸಾವಿರ ರೂಪಾಯಿಗಳವರೆಗೆ ಸಹಾಯಧನವನ್ನು ನಾಲ್ಕು ವರ್ಷಗಳ ಶೈಕ್ಷಣಿಕ ಪ್ರಗತಿಗೆ ಉಚಿತವಾಗಿ ಧರ್ಮಸ್ಥಳದ ಮಂಜುನಾಥ ಸ್ವಾಮಿಯ ಪ್ರಸಾದ ರೂಪದಲ್ಲಿ ಪೂಜ್ಯ ಕಾವಂದರೂ ರಾಜ್ಯಾದ್ಯಂತ ವಿತರಣೆ ಮಾಡುವ ಕಾರ್ಯವನ್ನು ಮಾಡುತ್ತಿದ್ದಾರೆ.

ಸುಜ್ಞಾನ ಶಿಷ್ಯ ನಿಧಿ ಕಾರ್ಯಕ್ರಮದ ಅಡಿಯಲ್ಲಿ ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಸಹಾಯಧನವನ್ನು ನೀಡುತ್ತಿರುವುದು ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಸಾಧಿಸಲು ಪೂರಕವಾಗಿದೆ ವಿದ್ಯಾರ್ಥಿಗಳು ಕೂಡ ತಮ್ಮ ಓದಿನ ಸಮಯದಲ್ಲಿ ವಿದ್ಯಾರ್ಜನೆಯ ಕಡೆಗೆ ಮಾತ್ರ ಗಮನಹರಿಸಿ ಶ್ರದ್ಧಾ ಭಕ್ತಿಯಿಂದ ವ್ಯಾಸಂಗ ಮಾಡುವ ಮೂಲಕ ತಮ್ಮ ವಿದ್ಯಾರ್ಥಿ ಜೀವನದಲ್ಲಿ ಸರ್ವ ಶ್ರೇಷ್ಠ ಸಾಧನೆ ಮಾಡಿ ತಂದೆ ತಾಯಿಗಳು ಹಾಗೂ ಗುರು ಹಿರಿಯರಿಗೆ ಕೀರ್ತಿ ತರುವ ಕೆಲಸ ಮಾಡಬೇಕು ಎಂದು ಶಾಸಕ ಮಂಜು ಕಿವಿಮಾತು ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಚನ್ನರಾಯಪಟ್ಟಣ ಜಿಲ್ಲಾ ವ್ಯಾಪ್ತಿಯ ನಿರ್ದೇಶಕರಾದ ಯೋಗೀಶ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿ ಧರ್ಮಸ್ಥಳ ಸುಕ್ಷೇತ್ರದ ಕೀರ್ತಿಯನ್ನು ದೇಶಾದ್ಯಂತ ವಿಸ್ತರಿಸುವ ಕಾರ್ಯವನ್ನು ಕೈಗೊಂಡಿರುವ ಪೂಜ್ಯ ಖಾವಂದರಾದ ಡಾ.ಡಿ. ವೀರೇಂದ್ರ ಹೆಗ್ಗಡೆಯವರು ಹಾಗೂ ಮಾತೃಶ್ರೀ ಶ್ರೀ ಹೇಮಾವತಿ ಅಮ್ಮನವರ ಸಮಾಜಮುಖಿ ಆಲೋಚನೆ ಹಾಗೂ ದೂರ ದೃಷ್ಟಿಯ ಫಲವಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಮಹಿಳಾ ಸಬಲೀಕರಣ ಸೇರಿದಂತೆ ಗುಡಿ ಕೈಗಾರಿಕೆ ಹೈನುಗಾರಿಕೆ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಫಲವನ್ನು ನೇರವಾಗಿ ಫಲಾನುಭವಿಗಳಿಗೆ ತಲುಪಿಸುವ ಕೆಲಸವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆಯು ಬದ್ಧತೆಯಿಂದ ಮಾಡಿ ನೋವಿಲ್ಲದ ಬಡಜನರ ದನಿಯಾಗಿ ಕೆಲಸ ಮಾಡುತ್ತಿದೆ ಎಂದು ಅಭಿಮಾನದಿಂದ ಹೇಳಿದರು.

ಧರ್ಮಸ್ಥಳ ಜನಜಾಗೃತಿ ವೇದಿಕೆಯ ಜಿಲ್ಲಾ ಅಧ್ಯಕ್ಷರಾದ ರಾಜ್ಯ ಆರ್ ಟಿ ಓ ಅಧಿಕಾ-ರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಳಿಕ ಮಾತನಾಡಿದ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಧರ್ಮಾಧಿಕಾರಿಗಳಾದ ಡಾ.ವೀರೇಂದ್ರ ಹೆಗ್ಗಡೆ ಹಾಗೂ ಹೇಮಾವತಿ ಹೆಗ್ಗಡೆಯವರು ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ಸುಜ್ಞಾನ ನಿಧಿ ಮೂಲಕ ವಿದ್ಯಾರ್ಥಿ ವೇತನವನ್ನು ನೀಡುವ ಮೂಲಕ ಮಕ್ಕಳ ಭವಿಷ್ಯ ರೂಪಿಸಿಕೊಳ್ಳಲು ಕಾರಣರಾಗಿದ್ದಾರೆ. ವಿದ್ಯಾರ್ಥಿಗಳು ಉತ್ತಮ ಜ್ಞಾನಾರ್ಜನೆ ಮಾಡಿ ಉತ್ತಮ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ಕೃಷ್ಣರಾಜಪೇಟೆ ಹಾಗೂ ಕಿಕ್ಕೇರಿ ಯೋಜನಾ ವ್ಯಾಪ್ತಿಯ 500ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸುಜ್ಞಾನ ಶಿಷ್ಯನಿಧಿ ಯೋಜನೆ ಅಡಿಯಲ್ಲಿ ಸಹಾಯಧನದ ಮಂಜೂರಾತಿ ಪತ್ರಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಕೃಷ್ಣರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್ ಪೆಕ್ಟರ್ ಆನಂದೇಗೌಡ, ಪುರಸಭಾ ಸದಸ್ಯ ಕೆ.ಆರ್.ರವೀಂದ್ರ ಬಾಬು, ಕೃಷ್ಣರಾಜಪೇಟೆ ತಾಲೂಕು ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಅರವಿಂದ ಕಾರಂತ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷರಾದ ಎಂ.ಕೆ.ಹರಿಚರಣ ತಿಲಕ್, ಕೆ.ಆರ್.ನೀಲಕಂಠ, ಕಾರ್ಯಾಧ್ಯಕ್ಷ ಬಳ್ಳೇಕೆರೆ ಮಂಜುನಾಥ್, ಜನಜಾಗೃತಿ ವೇದಿಕೆಯ ಸದಸ್ಯರಾದ ಅಕ್ಕಿಹೆಬ್ಬಾಳು ರಘು, ತಾಲೂಕು ಯೋಜನಾಧಿಕಾರಿ ತಿಲಕರಾಜ್, ಗುಣಶ್ರೀ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ವನಮಹೋತ್ಸವ ಆಚರಣೆ ಬಾವೋಬಾಬ್ ಗಿಡಗಳಿಂದ ಅಂತರ್ಜಲ ಹೆಚ್ಚಳ: ಬಿರಾದಾರ

ಮುದ್ದೇಬಿಹಾಳ: ಬಾವೋಬಾಬ್ ಮರಗಳು ಅತೀ ದೀರ್ಘ ಕಾಲದ ಆಯುಷ್ಯ ಹೊಂದಿದ್ದು, ಅವುಗಳ ನೆಡುವಿಕೆಯಿಂದ ಅಂತರ್ಜಲ ಹೆಚ್ಚಲಿದೆ ಎಂದು ತಾಲ್ಲೂಕು ವಲಯ ಅರಣ್ಯಾಧಿಕಾರಿ ಬಸನಗೌಡ ಬಿರಾದಾರ ಹೇಳಿದರು.

ಅವರು ಬುಧವಾರ, ಬಿದರಕುಂದಿ ಬೆಟ್ಟದಲ್ಲಿರುವ ಸಾಲುಮರದ ತಿಮ್ಮಕ್ಕ ವೃಕ್ಷೋದ್ಯಾನದಲ್ಲಿ ನಡೆದ ವನಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ವೃಕ್ಷೋದ್ಯಾನದಲ್ಲಿ ಗಿಡಗಳನ್ನು ನೆಡುವ ಹಾಗೂ ಅದರ ಸೌಂದರ್ಯ ಹೆಚ್ಚಿಸುವ ಕಾರ್ಯ ಸಮರೋಪಾದಿಯಲ್ಲಿ ನಡೆದಿದೆ ಎಂದರು.

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಸಹಾಯಕ ವಲಯ ಅರಣ್ಯಾಧಿಕಾರಿ, ರಾಜೇಂದ್ರ ಹುನ್ನೂರ, ಅರಣ್ಯ ಇಲಾಖೆಯ ವಿಠ್ಠಲ ಬೋರಟಗಿ, ವಿಜಯಕುಮಾರ್ ಕಿತ್ತೂರ, ಯಲಗೂರಪ್ಪ, ಹಸಿರು ತೋರಣ ಬಳಗದ ಅಧ್ಯಕ್ಷ ಬಿ.ಎಚ್.ಬಳಬಟ್ಟಿ, ಕಾರ್ಯದರ್ಶಿ ಅಮರೇಶ ಗೂಳಿ, ಸಂಚಾಲಕ ಮಹಾಬಲೇಶ್ವರ ಗಡೇದ, ತಾಲ್ಲೂಕು ಪಂಚಾಯತ ಮಾಜಿ ಸದಸ್ಯ ಶ್ರೀಶೈಲ ಮರೋಳ, ಮಾಜಿ ಅಧ್ಯಕ್ಷರಾದ ನಾಗಭೂಷಣ ನಾವದಗಿ, ಅಶೋಕ ರೇವಡಿ, ರವಿ ಗೂಳಿ, ಸದಸ್ಯರಾದ ಮಲ್ಲಿಕಾರ್ಜುನ ಬಾಗೇವಾಡಿ, ಸುರೇಶ ಕಲಾಲ,

ವಿಲಾಸರಾವ್ ದೇಶಪಾಂಡೆ, ವೆಂಕನಗೌಡ ಪಾಟೀಲ, ಅಮರೇಶ ಐಹೊಳೆ, ಕಿರಣ ಪಾಟೀಲ, ವಿನಯ ಹಿರೇಮಠ, ಮಹಾಂತೇಶ ಬಸನಗೌಡ್ರ, ಈರಯ್ಯ ಮಠ, ಆದೇಶ ಕೋಳೂರ, ರೇಶ್ಮಾ ಮಾಳನೂರ ಬಿದರಕುಂದಿ, ಸೀತಿಮನಿ, ಚಿಕ್ಕ ನರಗುಂದ, ಮತ್ತಿತರರು ಇದ್ದರು. ಪರಮಾನಂದ ಪಾಟೀಲ ಪ್ರಾರ್ಥಿಸಿದರು. ಮಹಾಬಲೇಶ್ವರ ಗಡೇದ ಸ್ವಾಗತಿಸಿ, ನಿರೂಪಿಸಿದರು.



## ಜಾತಿ ಜನಗಣತಿಯಲ್ಲಿ ವೀರಶೈವ ಲಿಂಗಾಯತ, ಜಂಗಮ ಎಂದು ಬರೆಸಿ :ಕೆ. ಎಂ ಮಹೇಶ್ವರ ಸ್ವಾಮಿ ಕರೆ



ಬಳ್ಳಾರಿ: ರಾಜ್ಯ ಸರ್ಕಾರ ನಡೆಸುತ್ತಿರುವ ಜಾತಿ ಜನಗಣತಿಯಲ್ಲಿ ರಾಜ್ಯದ ಜಂಗಮರು ಜಾತಿ ಕಾಲಮ್‌ನಲ್ಲಿ ವೀರಶೈವ ಲಿಂಗಾಯತ ಜಂಗಮ ಎಂದು ಬರೆಸಿ ಎಂದು ಭಾರತೀಯ ವೀರಶೈವ ಲಿಂಗಾಯತ ಜಂಗಮ ಪರಿಷತ್ ರಾಷ್ಟ್ರ ಅಧ್ಯಕ್ಷರಾದ ಕೆಎಂ ಮಹೇಶ್ವರ ಸ್ವಾಮಿ ಕರೆ ನೀಡಿದರು.

ಅವರು ನಗರದ ರಾಘವ ಕಲಾಮಂದಿರದಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿ ಜಂಗಮರು ಬೇಡ ಜಂಗಮ ಎಂದು ಜಾತಿ ಕಾಲಮ್ ನಲ್ಲಿ ಬರಸಿ ಕಾನೂನಿನ ತೊಡಕಿನಲ್ಲಿ ಸಿಕ್ಕಿದ್ದಾರೆ, ಇದು ಕಲಬುರಗಿ ನ್ಯಾಯಾಲಯದ ಆದೇಶದಲ್ಲಿ ಅರ್ಚಕರು ಮದುವೆ ಮಾಡಿಸುವ ಸ್ವಾಮಿಗಳು ಜಂಗಮರು ಬೇಡ ಜಂಗಮ ಜಾತಿಯಲ್ಲಿ ಬರುವುದಿಲ್ಲ ಎಂದು ಸ್ಪಷ್ಟವಾದ ಆದೇಶವನ್ನು ನೀಡಿದೆ. ಕಾರಣ ನಮ್ಮ ಮುಂದಿನ ಪೀಳಿಗೆ ಕಾನೂನಿನ ತೊಡಕಿನಲ್ಲಿ ಸಿಕ್ಕು ತೊಂದರೆ ಅನುಭವಿಸುವುದನ್ನು ತಪ್ಪಿಸಲು ವೀರಶೈವ ಲಿಂಗಾಯತ ಜಂಗಮ ಎಂದು ಬರೆಸುವಂತೆ ತಿಳಿಸಿದರು.

ಜಂಗಮರು ಕುಟುಂಬ ನಿರ್ವಹಣೆಗಾಗಿ ಹೋಟೆಲ್ ನಡೆಸುವುದು ಮಹಿಳೆಯರು ಮನೆ ಕೆಲಸವನ್ನು ನಿರ್ವಹಿಸುವುದು ಖಾನಾವಳಿ ನಡೆಸುವುದು ಕೂಲಿ ಕೆಲಸ ಮಾಡುವುದು ಆಟೋ-ರಿಕ್ಷಾ ಓಡಿಸಿ ಜೀವನ ನಡೆಸುತ್ತಿದ್ದಾರೆ. ಹೀಗೆ ಜಂಗಮರು ಅತ್ಯಂತ ಬಡತನದಲ್ಲಿ ಬದುಕುತ್ತಿದ್ದಾರೆ. ಹೀಗೆ ನಮ್ಮ ಜನಾಂಗದ ಸರ್ವತೋಮುಖ ಅಭಿವೃದ್ಧಿಗಾಗಿ ಜಾತಿ ಕಲಂ ನಲ್ಲಿ ಬೇಡ ಜಂಗಮ ಎಂದು ಬರೆಸದೆ ವೀರಶೈವ ಲಿಂಗಾಯತ ಜಂಗಮ ಎಂದು ಬರೆಸಿ ಎಂದು ಜಂಗಮದಾಯಕ್ಕೆ ತಿಳಿಸಿದರು.

ಈ ಉದ್ದೇಶಕ್ಕಾಗಿ ನಾಳೆ ಬಳ್ಳಾರಿ ರಾಘವ ಕಲಾ ಮಂದಿರದಲ್ಲಿ ಜಂಗಮರ ಜಾಗೃತ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ದಯವಿಟ್ಟು ಎಲ್ಲಾ ಜಂಗಮರು ಬಂದು ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕೋರಿದರು. ಧರ್ಮವನ್ನು ವೀರಶೈವ ಎಂದು ಬರೆಸಬೇಕು ಅಥವಾ ಹಿಂದೂ ಎಂದು ಬರೆಸಬೇಕು ಎಂಬ ಗೊಂದಲವಿದೆ 19 ರಂದು ಹುಬ್ಬಳ್ಳಿಯ ನೆಹರು ಮೈದಾನದಲ್ಲಿ ಹಮ್ಮಿಕೊಂಡ ರಾಜ್ಯ ಸಮಾವೇಶದಲ್ಲಿ ಇದನ್ನು ನಿರ್ಧರಿಸಲಾಗುವುದು.

ಈ ಸಮಾವೇಶದಲ್ಲಿ ನಿರ್ಧ-ರಿಸಿದಂತೆ ಜಂಗಮರು ಜಾತಿ ಜನಗಣತಿಯಲ್ಲಿ ದಾಖಲಿಸಬೇಕೆಂದು ಮನವಿ ಮಾಡಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಜಂಗಮ ಪರಿಷತ್ತಿನ ಖಜಾಂಚಿಯಾದ ಬಿಎಸ್ ಪ್ರಭಯ್ಯ, ಬಳ್ಳಾರಿ ಜಿಲ್ಲಾ ಅಧ್ಯಕ್ಷರಾದ ಎಚ್ ಕೆ ಗೌರಿಶಂಕರ್, ಕಾರ್ಯದರ್ಶಿ ಚಂದ್ರಮೌಳಿ, ನಾಗರಾಜ್, ಕಿರಣ್ ಕುಮಾರ್, ವಿಭೂತಿ ಎರ್ರಿಸ್ವಾಮಿ, ಬಿ ರುದ್ರಯ್ಯ, ರೇಣುಕಾ ಪ್ರಸಾದ್, ವಾಮದೇವಯ್ಯ, ಕೆ ಎಮ್ ಕೊಟ್ರೇಶ್, ಎಂ ಕೊಟ್ಟೂರು ಸ್ವಾಮಿ, ವಕೀಲರಾದ ಗುರುಬಸವರಾಜ್, ಕೋಳೂರು ಚಂದ್ರಶೇಖರ್ ಗೌಡ, ಜಾಲಿಹಾಳ್ ಶ್ರೀಧರ್, ಹಚ್ಚೊಳ್ಳಿ ಅಮರೇಶ್ ಸೇರಿದಂತೆ ಇತರರಿದ್ದರು.

## ಮಾಚೇನಹಳ್ಳಿ ಗ್ರಾಮದಲ್ಲಿ ಡಿಎಸ್ಎಸ್ ಗ್ರಾಮ ಶಾಖೆಗೆ ನಾಗತಿಹಳ್ಳಿ ಕೃಷ್ಣಮೂರ್ತಿ ಚಾಲನೆ



ತುರುವೇಕೆರೆ: ತಾಲೂಕಿನ ದಂಡಿನಶಿವರ ಹೋಬಳಿ ವ್ಯಾಪ್ತಿಗೆ ಬರುವ ಮಾಚೇನಹಳ್ಳಿ ಗ್ರಾಮದಲ್ಲಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ 47/74/75(ರಿ) ಕರ್ನಾಟಕ ದಲಿತ ಸಂಘರ್ಷ ಸಮಿತಿ ಗ್ರಾಮ ಶಾಖೆಯನ್ನು ಅಧ್ಯಕ್ಷತೆಯನ್ನು ವಹಿಸಿದ್ದ ತಾಲೂಕು ಸಂಚಾಲಕ ತಿಮ್ಮೇಶ್ ರವರ ನೇತೃತ್ವದಲ್ಲಿ ಗ್ರಾಮ ಶಾಖೆಯನ್ನು ಜಿಲ್ಲಾ ಸಂಚಾಲಕರಾದ ನಾಗತಿಹಳ್ಳಿ ಕೃಷ್ಣಮೂರ್ತಿ ರವರು ದೀಪ ಬೆಳಗುವುದರ ಮೂಲಕ ಚಾಲನೆ ನೀಡಿ ಹಾಗೂ ಗ್ರಾಮ ಶಾಖೆಯ ನಾಮಫಲಕವನ್ನು ಜಿಲ್ಲಾ ಸಂಘಟನಾ ಸಂಚಾಲಕರಾದ ದಂಡಿನ ಶಿವರ ಕುಮಾರ್ ಉದ್ಘಾಟಿಸಿದರು.

ಇದೆ ವೇಳೆ ಗ್ರಾಮ ಶಾಖೆಯ ಪದಾಧಿಕಾ-ರಿಗಳ ಆಯ್ಕೆ ಮಾಡಲಾಗಿ ತಾಲೂಕು ಸಂಘಟನಾ ಸಂಚಾಲಕರಾಗಿ ಪ್ರಸಾದ್, ಗ್ರಾಮ ಸಂಚಾಲಕರಾಗಿ ನಾರಾಯಣ, ಗ್ರಾಮ ಶಾಖೆಯ ಸಂಘಟನಾ ಸಂಚಾಲಕರುಗಳಾಗಿ ಗಂಗಾಧರ್, ರಾಮಚಂದ್ರಯ್ಯ, ನಾಗೇಂದ್ರ, ಅಶೋಕ್, ನರಸಿಂಹಮೂರ್ತಿ, ಹಾಗೂ ಮಹಿಳಾ ಸಂಚಾಲಕರಾಗಿ ಗೌರಮ್ಮ ಗಿರೀಶ್, ಮಹಿಳಾ ಸಂಘಟನಾ ಸಂಚಾಲಕರಾಗಿ ಭೂಮಿಕಾ, ಗೌರಮ್ಮ ಕೃಷ್ಣಮೂರ್ತಿ ಇವರುಗಳನ್ನು ಆಯ್ಕೆ ಮಾಡಲಾಯಿತು, ಇದೆ ವೇಳೆ ಜಿಲ್ಲಾ ಸಂಚಾಲಕರಾದ ನಾಗತಿಹಳ್ಳಿ ಕೃಷ್ಣಮೂರ್ತಿ ಮಾತನಾಡಿ ದಲಿತ ಸಂಘರ್ಷ ಸಮಿತಿಯು ಪ್ರೊ ಬಿ ಕೃಷ್ಣಪ್ಪನವರ ಚಿಂತನೆ, ಆದ-ರ್ಶ ಮೈಗೂಡಿಸಿಕೊಂಡು ಮುನ್ನಡೆಯುತ್ತಿದ್ದು, ಹಲವು ವರ್ಷಗಳಿಂದ ದಲಿತರಿಗೆ, ಶೋಷಿತ-ರಿಗೆ ಅನ್ಯಾಯಕ್ಕೊಳಗಾದವರಿಗೆ ನ್ಯಾಯ ದೊರಕಿಸಿ ಕೊಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ನಾವುಗಳು ಸಹ ಅವರು ನಡೆದು ಬಂದ ದಾರಿಯನ್ನು ಅನುಸರಿಸಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ನಂತರ ಜಿಲ್ಲಾ ಸಂಘಟನಾ ಸಂಚಾಲಕರಾದ ದಂಡಿನ ಶಿವರ ಕುಮಾರ್ ಮಾತನಾಡಿ ಡಾ. ಬಿ ಆರ್ ಅಂಬೇಡ್ಕರ್‌ರವರು ಭಾರತೀಯ ಸಂವಿಧಾನದ ಪ್ರಮುಖ ವಾಸ್ತುಶಿಲ್ಪಿ, ಸಾಮಾಜಿ-ಕ ನ್ಯಾಯದ ಪ್ರತಿಪಾದಕ, ಮತ್ತು ದಲಿತರ ಹಾಗೂ ಮಹಿಳೆಯರ ಹಕ್ಕುಗಳ ಹೋರಾಟಗಾರರಾಗಿದ್ಧರು ಭಾರತದ ಸಂವಿಧಾನವನ್ನು ರಚಿಸುವಲ್ಲಿ ಪ್ರಮುಖ ಪಾತ್ರ ವಹಿಸುವುದರ ಜೊತೆಗೆ ಮೂಲಭೂತ ಹಕ್ಕುಗಳ ರಕ್ಷಣೆ, ಉದ್ಯೋಗ ವಿನಿಮಯ ಕೇಂದ್ರಗಳ ಸ್ಥಾಪನೆ ಮತ್ತು ಮಹಿಳೆಯರ ಹಕ್ಕುಗಳಿಗೆ ಅವರು ನೀಡಿದ ಕೊಡುಗೆಗಳು ಭಾರತೀಯ ಸಮಾಜದಲ್ಲಿ ಕ್ರಾಂತಿ-ಕಾರಿ ಬದಲಾವಣೆಗಳನ್ನು ಕಂಡಿದ್ದು ಒಂದು ಕಾಲದಲ್ಲಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ದಲಿತ ಸಂಘರ್ಷ ಸಮಿತಿ ಜಾತಿ ವಿನಾಶ, ಅಸ್ಪೃಶ್ಯತೆ ವಿನಾಶ, ಸರ್ವರಿಗೂ ಶಿಕ್ಷಣ, ಮೌಢ್ಯ, ಕಂದಾಚಾರ ವಿನಾಶ, ಭೂ ರಹಿತ-ರಿಗೆ ಭೂಮಿ ಹಂಚಿಕೆ ಹೀಗೆ ಹತ್ತು ಹಲವು ವಿಷಯ ಇಟ್ಟುಕೊಂಡು ದಲಿತ ಸಂಘರ್ಷ ಸಮಿತಿ ಹೋರಾಟ ಮಾಡುತ್ತಿದ್ದು ಈಗಲೂ ಸಹ ನಾವುಗಳು ಹಚ್ಚಿದ ಹಣತೆಯನ್ನು ಹಾರಿಸದೆ ನೋಡಿಕೊಳ್ಳುವಂತಹ ತಾಳ್ಮೆ ಬೆಳೆಸಿಕೊಂಡು ಸಾಮಾಜಿಕವಾಗಿ ಹೋರಾಟವನ್ನು ಮುನ್ನಡೆಸಲು ಇನ್ನೂ ಸಹ ನಾವು ಪುಟಿದೇಳಬೇಕು.

ಜಾತಿ ವಿನಾಶ ವೇದಿಕೆಯಲ್ಲಿ ಕ್ರಿಯಾಶೀಲರಾಗಿದ್ದ ಪ್ರೊ ಬಿ ಕೃಷ್ಣಪ್ಪ ಅವರು ಶೋಷಿತರಿಗೆ ಪ್ರತ್ಯೇಕ ಸಂಘಟನೆಯ ಅಗತ್ಯತೆ ಇದೆ ಎಂಬುದನ್ನರಿತು ದಲಿತ ಸಂಘರ್ಷ ಸಮಿತಿ ಹುಟ್ಟುಹಾಕಿದ್ದು ಈ ಸಂಘಟನೆ ಇಂದಿಗೂ ಬಹು ಸಮುದಾಯವನ್ನು ಒಟ್ಟಿಗೆ ತೆಗೆದುಕೊಂಡು ತನ್ನ ಹೋರಾಟವನ್ನು ಮುಂದುವರಿಸಿದೆ ಆದರೆ ಕೆಲವರು ಬಡವರ ಕಣ್ಣೀರು ಒರೆಸುವ ಬದಲಾಗಿ ರಕ್ತ ಬರುವಂತೆ ಮಾಡುತ್ತಿದ್ದಾರೆ ಅನ್ಯಾಯಕ್ಕೇ ಒಳಗಾದವರಿಗೆ ನ್ಯಾಯ ದೊರಕಿಸಿ ಕೊಡುವ ಪ್ರಾಮಾಣಿಕ ಪ್ರಯತ್ನ ನಾವುಗಳು ಮಾಡಬೇಕು ಅಲ್ಲದೆ ದಲಿತರ ಶ್ರೇಯೋಭಿವೃದ್ಧಿಗಾಗಿ ಸರಕಾರ ಹತ್ತು ಹಲವು ಯೋಜನೆ ರೂಪಿಸಿದ್ದರು.

ಮಾಹಿತಿ ಕೊರತೆಯಿಂದಾಗಿ ದಲಿತರ ಸ್ಥಿತಿಗತಿ ಇನ್ನೂ ಕೂಡ ಸುಧಾರಿಸಿಲ್ಲ ಇನ್ನು ಮುಂದಾದರು ಯೋಜನೆಗಳ ಬಗ್ಗೆ ಸಮಗ್ರವಾದ ಮಾಹಿತಿ ಪಡೆದು ನ್ಯಾಯದ ಪರವಾಗಿ ಹೋರಾಟ ಮಾಡಿ ಉತ್ತಮ ಜೀವನವನ್ನು ಈ ಸಮಾಜದಲ್ಲಿ ನಾವುಗಳು ಕಂಡುಕೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ನರಸಿಂಹಮೂರ್ತಿ ಆಗಸರಹಳ್ಳಿ, ರಾಜ್ಯ ಮಹಿಳಾ ಘಟಕದ ಸಂಘಟನಾ ಸಂಚಾಲಕರಾದ ಲಾವಣ್ಯ, ಗುಬ್ಬಿ ತಾಲೂಕು ಸಂಘಟನಾ ಸಂಚಾಲಕಿ ಸಂಧ್ಯಾ, ತುರುವೇಕೆರೆ ತಾಲೂಕು ಸಂಘಟನಾ ಸಂಚಾಲಕರುಗಳಾದ ಬೋರಪ್ಪ, ಗೋವಿಂದ್ ರಾಜ್, ಲಕ್ಷ್ಮೀಶ್, ಡಿ ಆರ್. ರಾಮಚಂದ್ರ, ಮಧು ಸಿದ್ದಾಪುರ, ಕೆಂಪಯ್ಯ, ಶಿವಣ್ಣ ಮುತ್ತುಗದಹಳ್ಳಿ, ವಿನಯ್ ,ಸಂತೋಷ್, ಹುಲ್ಲೇಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಗೌರಮ್ಮ, ಚಿಕ್ಕನಾಯಕನಹಳ್ಳಿ ಸಂಚಾಲಕರಾದ ಲಿಂಗರಾಜು, ಸಂಘಟನಾ ಸಂಚಾಲಕರಾದ ಗೋಪಾಲ್, ಅಲ್ಪಸಂಖ್ಯಾತರ ತುರುವೇಕೆರೆ ಘಟಕದ ತಾಲೂಕು ಸಂಚಾಲಕರಾದ ಅಬ್ಜಲ್, ಹೊನ್ನೇನಹಳ್ಳಿ ಕೃಷ್ಣಪ್ಪ, ತಿಪಟೂರು ಸಂಚಾಲಕರಾದ ಅರಚನಹಳ್ಳಿ ಮಂಜುನಾಥ್, ಇನ್ನು ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.